ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/03/ಉಖಾಯೋ/2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ, ಸಚಿವಾಲಯ-2
ಬೆಂಗಳೂರು, ದಿನಾಂಕ: 07.12.2013.

## ತಿದ್ದುಪಡಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಕಾರ್ಯಕ್ರಮಗಳಿಗಾಗಿ ಸರ್ಕಾರವು ಹೊರಡಿಸಿರುವ ಆದೇಶದ ಪತ್ರ ಸಂಖ್ಯೆ: ಗ್ರಾಅಪ/03/ಉಖಾಯೋ/2013 ದಿನಾಂಕ: 16.11.2013 ರಲ್ಲಿ ಅನುಬಂಧ-ಆ ಸೇರಿದಂತೆ, ಆದೇಶದಲ್ಲಿ ರಾಜ್ಯ ಗುಣ ನಿಯಂತ್ರಣ ಮಾನಿಟರ್‌ಗಳಿಗೆ ಹಾಗೂ ಜಿಲ್ಲಾ ಗುಣ ನಿಯಂತ್ರಣ ಮಾನಿಟರ್‌ಗಳಿಗೆ ಈಗಾಗಲೇ ಆದೇಶದ ದಿನಾಂಕ: 16.11.2013 ರಲ್ಲಿ ಹಂಚಿಕೆಯಾದ ಜಿಲ್ಲೆಗಳನ್ನು ಆದೇಶಿಸಿರುವುದನ್ನು ಈ ಕೂಡಲೇ ರದ್ದುಪಡಿಸಿದೆ. ಇಲಾಖೆವತಿಯಿಂದ ಆಯಾ ಯೋಜನೆಗಳಿಗೆ ಸಂಬಂಧಿಸಿದ ನಿರ್ದೇಶಕರು/ಆಯುಕ್ತರು/ಮುಖ್ಯ ಕಾರ್ಯಚರಣೆಯ ಅಧಿಕಾರಿಗಳು/ ಇತರೆ ಅಧಿಕಾರಿಗಳು ಆಗಿಂದಾಗ್ಗೆ ಅವಶ್ಯಕತೆಗೆ ತಕ್ಕಂತೆ ಕೆಲಸಗಳನ್ನು ವಹಿಸುವುದನ್ನು ನಿರ್ವಹಿಸುವುದು ಮತ್ತು ಎಮ್‌ಪ್ಯಾನಲ್ ಆಗಿರುವ ರಾಜ್ಯ/ಜಿಲ್ಲಾ ಗುಣ ನಿಯಂತ್ರಣ ಮಾನಿಟರ್‌ಗಳು ಕೂಡಲೇ ಪ್ರತಿಕ್ರಿಯಿಸುವುದು ಮತ್ತು ಈ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಯೋಜನೆಗಳಿಗೆ ಸಂಬಂಧಿಸಿದಂತೆ ವಹಿಸುವ ಇತರೆ ಕೆಲಸಗಳನ್ನು ಸಹ ನಿರ್ವಹಿಸಲು ಆದೇಶಿಸಿದೆ. ಈಗಾಗಲೇ, ಗುಣ ನಿಯಂತ್ರಣ ಮಾನಿಟರ್‌ಗಳ ಸಂಬಂಧ ದಿನಾಂಕ: 16.11.2013 ರಲ್ಲಿ ಹೊರಡಿಸಿರುವ ಆದೇಶದಲ್ಲಿ ವಿಧಿಸಿರುವ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ. (ರದ್ದುಪಡಿಸಿರುವ ಜಿಲ್ಲೆಗಳನ್ನು ಹೊರತುಪಡಿಸಿ).

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
(ಸೇವೆಗಳು- ಎ ಶಾಖೆ)

ಗೆ,

1. ಮಹಾಲೇಖಪಾಲಕರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲಕರು (ಆಡಿಟ್) ಕರ್ನಾಟಕ, ಬೆಂಗಳೂರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ.
4. ಮುಖ್ಯ ಕಾರ್ಯದರ್ಶಿ ಕರ್ನಾಟಕ ಸರ್ಕಾರ ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
5. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳಿಗೆ
6. ಮುಖ್ಯ ಕಾರ್ಯಚರಣಾಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿಗಳಿಗೆ.

8. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
9. ನಿರ್ದೇಶಕರು (ಅರಣ್ಯ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
10. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತಾ ಮಹಲ್ ರಸ್ತೆ, ಮೈಸೂರು.
11. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
12. ರಾಜ್ಯದ ಸಂಬಂಧಿಸಿದ ಎಲ್ಲಾ ಓಂಬಡ್ಸ್‌ಮನ್‌ಗಳಿಗೆ
13. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
14. ಜಂಟಿ ನಿರ್ದೇಶಕರು (ತಾಂತ್ರಿಕ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
15. ಜಂಟಿ ನಿರ್ದೇಶಕರು (ಆಡಳಿತ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
16. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
18. ಸಹಾಯಕ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
19. ಸಂಬಂಧಿಸಿದ ರಾಜ್ಯ ಮತ್ತು ಜಿಲ್ಲಾ ಗುಣ ನಿಯಂತ್ರಣ ಮಾನಿಟರ್‌ಗಳಿಗೆ
20. M/s Effia Technologies, ಅವರಿಗೆ www.end2endsolutions.com ನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
21. ಶ್ರೀ. ಶ್ರೀನಿವಾಸ ಮಾರಂಗಪ್ಪನವರ್, ವಿಶ್ಲೇಷಕರು ಗಣಕಕೋಶ ಇವರ ಮಾಹಿತಿಗಾಗಿ ಹಾಗೂ ಸದರಿ ಮಾಹಿತಿಯನ್ನು ಇಲಾಖಾ ಅಂತರ್‌ಜಾಲದಲ್ಲಿ ಪ್ರಕಟಿಸಲು ಕೋರಿದೆ.
22. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ.